# ಕರ್ನಾಟಕ ವಿಧಾನ ಪರಿಷತ್ತು

## ನೂರ ಐವತ್ತನೆಯ ಅಧಿವೇಶನ

## ಕಾರ್ಯಕಲಾಪಗಳ ಪಟ್ಟಿ

**ಶುಕ್ರವಾರ, ದಿನಾಂಕ:21ನೇ ಜುಲೈ, 2023**

**(ಸಮಯ: ಬೆಳಗ್ಗೆ: 10.00 ಗಂಟೆಗೆ)**

* * *

### 01. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ನಾಲ್ಕನೆಯ ಪಟ್ಟಿ

ಆ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ನಾಲ್ಕನೆಯ ಪಟ್ಟಿ

### 02. ವರದಿಯನ್ನೊಪ್ಪಿಸುವುದು

**ಶ್ರೀ ಎಂ.ಕೆ. ಪ್ರಾಣೇಶ್, ಮಾನ್ಯ ಉಪ ಸಭಾಪತಿಯವರು** (ಅಧ್ಯಕ್ಷರು, ಸದಸ್ಯರುಗಳ ಖಾಸಗಿ ವಿಧೇಯಕಗಳ ಮತ್ತು ನಿರ್ಣಯಗಳ ಸಮಿತಿ) 2023ನೇ ಸಾಲಿನ ಸದಸ್ಯರುಗಳ ಖಾಸಗಿ ವಿಧೇಯಕಗಳ ಮತ್ತು ನಿರ್ಣಯಗಳ ಸಮಿತಿಯ ಮೊದಲನೇ ವರದಿಯನ್ನೊಪ್ಪಿಸುವುದು.

### 03. ಸಭೆಯ ಮುಂದಿಡಲಾಗುವ ಕಾಗದ ಪತ್ರಗಳು

ಕಾರ್ಯದರ್ಶಿಯವರು ಈ ಕೆಳಕಂಡ ವಿಧೇಯಕಗಳನ್ನು ಮಂಡಿಸುವುದು

01. ಕರ್ನಾಟಕ ಧನವಿನಿಯೋಗ (ಸಂಖ್ಯೆ-2) ವಿಧೇಯಕ, 2023
02. ಕರ್ನಾಟಕ ಮೋಟಾರು ವಾಹನಗಳ ತೆರಿಗೆ ನಿರ್ಧರಣೆ (ತಿದ್ದುಪಡಿ) ವಿಧೇಯಕ, 2023
03. ಕರ್ನಾಟಕ ಅನುಸೂಚಿತ ಜಾತಿಗಳ ಮತ್ತು ಅನುಸೂಚಿತ ಬುಡಕಟ್ಟುಗಳ (ಕೆಲವು ಭೂಮಿಗಳ ವರ್ಗಾವಣೆಯ ನಿಷೇಧ) (ತಿದ್ದುಪಡಿ) ವಿಧೇಯಕ, 2023

## 04. ವಿತ್ತೀಯ ಕಾರ್ಯಕಲಾಪ

2023-24ನೇ ಸಾಲಿನ ಆಯವ್ಯಯ ಅಂದಾಜುಗಳ ಮೇಲಿನ ಮುಂದುವರೆದ ಚರ್ಚೆ ಹಾಗೂ ಸರ್ಕಾರದ ಉತ್ತರ

## 05. ಶಾಸನ ರಚನೆ

**ವಿಧೇಯಕಗಳನ್ನು ಪರ್ಯಾಲೋಚಿಸುವುದು ಹಾಗೂ ಅಂಗೀಕರಿಸುವುದು**

01. ಕರ್ನಾಟಕ ಧನವಿನಿಯೋಗ (ಸಂಖ್ಯೆ-2) ವಿಧೇಯಕ, 2023

**ಶ್ರೀ ಸಿದ್ದರಾಮಯ್ಯ (ಮಾನ್ಯ ಮುಖ್ಯಮಂತ್ರಿಯವರು) ಅವರು:-**

ಅ) ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ **2023ನೇ ಸಾಲಿನ "ಕರ್ನಾಟಕ ಧನವಿನಿಯೋಗ (ಸಂಖ್ಯೆ-2) ವಿಧೇಯಕ"**ವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

02. ಕರ್ನಾಟಕ ಮೋಟಾರು ವಾಹನಗಳ ತೆರಿಗೆ ನಿರ್ಧರಣೆ (ತಿದ್ದುಪಡಿ) ವಿಧೇಯಕ, 2023

**ಶ್ರೀ ರಾಮಲಿಂಗಾ ರೆಡ್ಡಿ (ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರು) ಅವರು:-**

ಅ) ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ **2023ನೇ ಸಾಲಿನ "ಕರ್ನಾಟಕ ಮೋಟಾರು ವಾಹನಗಳ ತೆರಿಗೆ ನಿರ್ಧರಣೆ (ತಿದ್ದುಪಡಿ) ವಿಧೇಯಕ"**ವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

03. ಕರ್ನಾಟಕ ಅನುಸೂಚಿತ ಜಾತಿಗಳ ಮತ್ತು ಅನುಸೂಚಿತ ಬುಡಕಟ್ಟುಗಳ (ಕೆಲವು ಭೂಮಿಗಳ ವರ್ಗಾವಣೆಯ ನಿಷೇಧ) (ತಿದ್ದುಪಡಿ) ವಿಧೇಯಕ, 2023

**ಶ್ರೀ ಕೃಷ್ಣ ಭೈರೇಗೌಡ (ಮಾನ್ಯ ಕಂದಾಯ ಸಚಿವರು) ಅವರು:-**

ಅ) ವಿಧಾನ ಸಭೆಯಿಂದ ತಿದ್ದುಪಡಿಯೊಂದಿಗೆ ಅಂಗೀಕೃತ ರೂಪದಲ್ಲಿರುವ **2023ನೇ ಸಾಲಿನ "ಕರ್ನಾಟಕ ಅನುಸೂಚಿತ ಜಾತಿಗಳ ಮತ್ತು ಅನುಸೂಚಿತ ಬುಡಕಟ್ಟುಗಳ (ಕೆಲವು ಭೂಮಿಗಳ ವರ್ಗಾವಣೆಯ ನಿಷೇಧ) (ತಿದ್ದುಪಡಿ) ವಿಧೇಯಕ"**ವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

...3

## ೦೬. ಸದಸ್ಯರ ಖಾಸಗಿ ಕಾರ್ಯಕಲಾಪ

### ಖಾಸಗಿ ನಿರ್ಣಯ

**ಶ್ರೀ ಯು.ಬಿ. ವೆಂಕಟೇಶ್ ಅವರು ಈ ಕೆಳಕಂಡ ಖಾಸಗಿ ನಿರ್ಣಯದ ಕುರಿತು ಚರ್ಚೆ:-**

"ರಾಜ್ಯದಲ್ಲಿರುವ ರಾಜ್ಯ ಮತ್ತು ಕೇಂದ್ರ ಸರ್ಕಾರದ ಎಲ್ಲಾ ಇಲಾಖೆಗಳಲ್ಲಿ ಹಾಗೂ ಸರ್ಕಾರೇತರ ಸಂಸ್ಥೆಗಳಲ್ಲಿ 'ಸಿ' ಮತ್ತು 'ಡಿ' ದರ್ಜೆಯ ಹುದ್ದೆಗಳನ್ನು ಸ್ಥಳೀಯರಿಗೆ ಮೀಸಲಿಡುವ ಕುರಿತಂತೆ ಸಂವಿಧಾನಕ್ಕೆ ತಿದ್ದುಪಡಿ ತರುವ ಉದ್ದೇಶದ ಕುರಿತು" ಮಂಡಿಸಿರುವ ನಿರ್ಣಯದ ಮೇಲೆ ಚರ್ಚೆ.

## 07. ಗಮನ ಸೆಳೆಯುವ ಸೂಚನೆಗಳು

01 **ಶ್ರೀ ಎಂ.ಎಲ್. ಅನಿಲ್ ಕುಮಾರ್** ಅವರು PMGSY ಯೋಜನೆಯಿಂದ ಸಂಪರ್ಕವಿಲ್ಲದ ವಾಸ ಸ್ಥಳಗಳಿಗೆ ಉತ್ತಮ ಗುಣಮಟ್ಟದ ರಸ್ತೆ ಸಂಪರ್ಕವನ್ನು ಒದಗಿಸುತ್ತಿದ್ದು, ನಮ್ಮ ಗ್ರಾಮ-ನಮ್ಮ ರಸ್ತೆ ಯೋಜನೆಗೆ 5 ವರ್ಷಗಳಿಂದ ಯಾವುದೇ ಅನುದಾನ ನೀಡದೆ ಇರುವುದರಿಂದ ಗ್ರಾಮೀಣ ಭಾಗದ ರಸ್ತೆ ಅಭಿವೃದ್ಧಿ ಕುಂಠಿತವಾಗಿರುವ ಕುರಿತು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರ ಗಮನ ಸೆಳೆಯುವುದು.

02 **ಶ್ರೀ ಅ.ದೇವೇಗೌಡ** ಅವರು ರಾಜ್ಯದಲ್ಲಿ ಗಾಂಜಾ ಮತ್ತು ಡ್ರಗ್ಸ್ ಕಳ್ಳಸಾಗಾಣಿಕೆ ಹಾಗೂ ಮಾರಾಟವನ್ನು ತಡೆಗಟ್ಟಲು ಕಾನೂನು ರೂಪಿಸುವ ಕುರಿತು ಗೃಹ ಸಚಿವರ ಗಮನ ಸೆಳೆಯುವುದು.

03 **ಡಾ: ವೈ.ಎ. ನಾರಾಯಣಸ್ವಾಮಿ** ಅವರು ಸರ್ಕಾರಿ ಪ್ರೌಢ ಶಾಲಾ ಶಿಕ್ಷಕರಿಗೆ ಪದವಿ ಪೂರ್ವ ಕಾಲೇಜುಗಳಿಗೆ ಪದೋನ್ನತಿ ನೀಡಿ ಸುಮಾರು 9 ವರ್ಷಗಳಾಗಿದ್ದು, ತದನಂತರದ ದಿನಗಳಲ್ಲಿ ಸುಮಾರು ಅರ್ಹ ಸಹ ಶಿಕ್ಷಕರು ಪದೋನ್ನತಿ ಪಡೆಯದೆ ನಿರಾಶರಾಗಿರುವ ಕುರಿತು ಶಾಲಾ ಶಿಕ್ಷಣ ಹಾಗೂ ಸಾಕ್ಷರತಾ ಇಲಾಖಾ ಸಚಿವರ ಗಮನ ಸೆಳೆಯುವುದು.

04 **ಶ್ರೀ ಮರಿತಿಬ್ಬೇಗೌಡ** ಅವರು ಮಂಡ್ಯ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯಲ್ಲಿ ದಿನಾಂಕ:22.12.2005 ಹಾಗೂ 28.12.2005 ರಂದು ನೇಮಕಗೊಂಡಿರುವ ಅಸೋಸಿಯೇಟ್ ಪ್ರೊಫೆಸರ್‌ಗಳು ನಿವೃತ್ತಿ ಹೊಂದಿದ್ದು ಅವರುಗಳಿಗೆ ಹಳೆ ಪಿಂಚಣಿ ಯೋಜನೆಯಡಿಯಲ್ಲಿ ಪಿಂಚಣಿ ಮಂಜೂರು ಮಾಡದಿರುವ ಕುರಿತು ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ ಸಚಿವರ ಗಮನ ಸೆಳೆಯುವುದು.

...4

05 **ಶ್ರೀಯುತರುಗಳಾದ ಡಿ.ಎಸ್. ಅರುಣ್, ಪ್ರತಾಪ್ ಸಿಂಹ ನಾಯಕ್ ಕೆ ಹಾಗೂ ಶ್ರೀಮತಿ ಭಾರತಿಶೆಟ್ಟಿ** ಅವರುಗಳು ಮೂಡಿಗೆರೆಯಲ್ಲಿ ಬಿ.ಜೆ.ಪಿ. ಯುವ ಮೋರ್ಚಾ ಅಧ್ಯಕ್ಷರ ಮೇಲೆ ನಡೆದಿರುವ ಹಲ್ಲೆ ಕುರಿತು ಗೃಹ ಸಚಿವರ ಗಮನ ಸೆಳೆಯುವುದು.

06 **ಶ್ರೀ ಅಡಗೂರು ಹೆಚ್ ವಿಶ್ವನಾಥ್** ಅವರು ಕರ್ನಾಟಕ ಸರ್ಕಾರದ ವಿವಿಧ ಇಲಾಖೆಗಳಲ್ಲಿ ನಿವೃತ್ತ ಅಧಿಕಾರಿಗಳು ಗುತ್ತಿಗೆ ಆಧಾರದ ಮೇಲೆ ಕೆಲಸ ನಿರ್ವಹಿಸುತ್ತಿರುವುದರಿಂದ, ವಿದ್ಯಾವಂತ ಯುವಕ/ಯುವತಿಯರು ಉದ್ಯೋಗವಕಾಶದಿಂದ ವಂಚಿತರಾಗಿರುವ ಕುರಿತು ಮಾನ್ಯ ಮುಖ್ಯಮಂತ್ರಿಗಳ ಗಮನ ಸೆಳೆಯುವುದು.

07 **ಶ್ರೀಯುತರುಗಳಾದ ಶಶೀಲ್ ಜಿ ನಮೋಶಿ ಹಾಗೂ ವೈ.ಎಂ. ಸತೀಶ್** ಅವರುಗಳು ಕಲ್ಯಾಣ ಕರ್ನಾಟಕ ಭಾಗದ ಜಿಲ್ಲೆಗಳಲ್ಲಿ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯಲ್ಲಿ ಖಾಲಿ ಇರುವ ಉಪ ನಿರ್ದೇಶಕ, ಸಹಾಯಕ ನಿರ್ದೇಶಕ, ಹಿರಿಯ ಸಹಾಯಕ ನಿರ್ದೇಶಕ ಹುದ್ದೆಗಳನ್ನು ನೇಮಕಾತಿ ಮಾಡುವ ಕುರಿತು ಮಾನ್ಯ ಮುಖ್ಯ ಮಂತ್ರಿಯವರ ಗಮನ ಸೆಳೆಯುವುದು.

08 **ಶ್ರೀ ಅರವಿಂದ ಕುಮಾರ್ ಅರಳಿ** ಅವರು ಬೀದರ್ ಜಿಲ್ಲೆಯ ಬೀದರ್ ಹಾಗೂ ಔರಾದ ತಾಲ್ಲೂಕಿನಲ್ಲಿ ಅಲೆಮಾರಿ, ಅರೆ ಅಲೆಮಾರಿ ಜನಾಂಗದ ಕುಟುಂಬಗಳಿಗೆ ಮೂಲಭೂತ ಸೌಲಭ್ಯಗಳನ್ನು ಕಲ್ಪಿಸದಿರುವ ಕುರಿತು ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರ ಗಮನ ಸೆಳೆಯುವುದು.

09 **ಶ್ರೀ ಸುನೀಲ್‌ಗೌಡ ಪಾಟೀಲ್** ಅವರು ಹೆಬ್ಬಾಳದ ಚಿರಶಾಂತಿ ಧಾಮ, ವಿದ್ಯುತ್ ಚಿತಾಗಾರದ ಹೊಗೆ ಉಗುಳುವ ಚಿಮಣಿಯಿಂದ ಹೊರಬರುತ್ತಿರುವ ಹೊಗೆಯಿಂದಾಗಿ ಶಾಲಾ ಮಕ್ಕಳಿಗೆ, ಆಸ್ಪತ್ರೆಯಲ್ಲಿರುವ ರೋಗಿಗಳಿಗೆ ಮತ್ತು ಸುತ್ತಮುತ್ತಲಿರುವ ಸಾರ್ವಜನಿಕರಿಗೆ ಉಸಿರಾಟದ ತೊಂದರೆ ಆಗುತ್ತಿರುವ ಕುರಿತು ಮಾನ್ಯ ಉಪ ಮುಖ್ಯಮಂತ್ರಿಯವರ ಗಮನ ಸೆಳೆಯುವುದು.

10. **ಶ್ರೀ ಕೆ. ಹರೀಶ್ ಕುಮಾರ್** ಅವರು ಕರ್ನಾಟಕ ರಾಜ್ಯದ ಸರ್ಕಾರಿ ಪಾಲಿಟೆಕ್ನಿಕ್ ಮತ್ತು ಇಂಜಿನಿಯರಿಂಗ್ ಕಾಲೇಜುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಅರೆಕಾಲಿಕ ಉಪನ್ಯಾಸಕರುಗಳಿಗೆ ವೇತನ ನಿಗದಿ ಹಾಗೂ ಸೇವಾ ಭದ್ರತೆಯನ್ನು ಒದಗಿಸುವ ಕುರಿತು ಮಾನ್ಯ ಉನ್ನತ ಶಿಕ್ಷಣ ಸಚಿವರ ಗಮನ ಸೆಳೆಯುವುದು.

## 08. ನಿಯಮ 330ರ ಮೇರೆಗೆ

01 **ಶ್ರೀ ನಿರಾಣಿ ಹಣಮಂತ ರುದ್ರಪ್ಪ** ಅವರು ಉತ್ತರ ಕರ್ನಾಟಕದ ಭಾಗದಲ್ಲಿ ಸಾಕಷ್ಟು ನದಿಗಳಿದ್ದರೂ ನೀರಿನ ಸಮರ್ಪಕ ಬಳಕೆಯಾಗುತ್ತಿಲ್ಲದಿರುವ ಕುರಿತು ಪ್ರಸ್ತಾಪಿಸುವುದು.

02 **ಶ್ರೀಯುತರುಗಳಾದ ಬಿ.ಎಂ. ಫಾರೂಖ್ ಹಾಗೂ ಕೆ.ಎ. ತಿಪ್ಪೇಸ್ವಾಮಿ ಅವರುಗಳು** ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯಲ್ಲಿ BSF (BLACK SOLIDER FLY) ತಂತ್ರಜ್ಞಾನವನ್ನು ಬಳಸಿಕೊಂಡು ತ್ಯಾಜ್ಯ ಮುಕ್ತ ಬೆಂಗಳೂರನ್ನು ಮಾಡುವ ಕುರಿತು ಪ್ರಸ್ತಾಪಿಸುವುದು.

...5

೦೩ **ಡಾ: ವೈ.ಎ. ನಾರಾಯಣಸ್ವಾಮಿ** ಅವರು ಬೆಂಗಳೂರು ನಗರದ ಬ್ಯಾಟರಾಯನಪುರ ಕ್ಷೇತ್ರದ ಚಿಕ್ಕಬೆಟ್ಟಹಳ್ಳಿ ಗ್ರಾಮದ ಸರ್ವೆ ನಂ:11/1 ಜಮೀನಿನ ಎಲ್ಲಾ ನಿವೇಶನಗಳ ಸಂಖ್ಯೆಗಳನ್ನು ಬದಲಾಯಿಸಿ ಮಾರಾಟ ಮಾಡಿರುವ ಕುರಿತು ಪ್ರಸ್ತಾಪಿಸುವುದು.

೦೪ **ಶ್ರೀಯುತರುಗಳಾದ ಕೋಟ ಶ್ರೀನಿವಾಸ ಪೂಜಾರಿ, ಕೇಶವ ಪ್ರಸಾದ್ ಎಸ್, ಶಶೀಲ್ ಜಿ ನಮೋಶಿ, ಶ್ರೀಮತಿ ಭಾರತಿ ಶೆಟ್ಟಿ, ಎನ್. ರವಿಕುಮಾರ್ ಹಾಗೂ ಇತರರು** ಶಿಕ್ಷಣ ಸಂಸ್ಥೆಯಾದ ಜನಸೇವಾ ಟ್ರಸ್ಟ್‌ಗೆ ಈ ಹಿಂದೆ ಬೆಂಗಳೂರು ದಕ್ಷಿಣ ತಾಲ್ಲೂಕಿನ ತಾವರೆಕೆರೆ ಹೋಬಳಿ, ಕುರುಬರಹಳ್ಳಿ ಗ್ರಾಮದಲ್ಲಿ 35 ಎಕರೆ ಜಮೀನು ಮಂಜೂರಾಗಿದ್ದು, ಪ್ರಸ್ತುತ ಈ ಆದೇಶವನ್ನು ತಡೆಹಿಡಿದಿರುವ ಕುರಿತು ಪ್ರಸ್ತಾಪಿಸುವುದು.

೦೫ **ಶ್ರೀ ಎಸ್.ವ್ಹಿ. ಸಂಕನೂರ** ಅವರು ಕರ್ನಾಟಕ ರಾಜ್ಯದಲ್ಲಿ 6 ರಿಂದ 10ನೇ ತರಗತಿಗಳ ಪಠ್ಯ ಪುಸ್ತಕಗಳಲ್ಲಿ ಕೆಲವೊಂದು ಪಾಠಗಳನ್ನು ತರಾತುರಿಯಲ್ಲಿ ಬದಲಾಯಿಸಿರುವುದರಿಂದ ಮಕ್ಕಳು ಹಾಗೂ ಪಾಲಕರು ಆತಂಕಗೊಂಡಿರುವ ಕುರಿತು ಪ್ರಸ್ತಾಪಿಸುವುದು.

## 09. ನಿಯಮ 68ರ ಮೇರೆಗೆ ಸಾರ್ವಜನಿಕ ಮಹತ್ವದ ವಿಷಯದ ಚರ್ಚೆ

| | |
|---|---|
| **ಶ್ರೀಯುತರುಗಳಾದ:- ಎಸ್.ಎಲ್.ಭೋಜೇಗೌಡ, ಕೆ.ಎ. ತಿಪ್ಪೇಸ್ವಾಮಿ, ಬಿ.ಎಂ.ಫಾರೂಖ್, ಗೋವಿಂದರಾಜು ಮತ್ತು ನಿರಾಣಿ ಹಣಮಂತ ರುದ್ರಪ್ಪ ಹಾಗೂ ಇತರರು** | ಮಹದಾಯಿ, ಮೇಕೆದಾಟು ಮತ್ತು ಭದ್ರಾ ಮೇಲ್ದಂಡೆ ನೀರಾವರಿ ಯೋಜನೆಗಳಿಗೆ ಅಗತ್ಯವಿರುವ ಅನುದಾನವನ್ನು ಆಯವ್ಯಯದಲ್ಲಿ ಒದಗಿಸದೇ ಇರುವುದರಿಂದ ನೀರಾವರಿ ಯೋಜನೆಗಳ ಅನುಷ್ಠಾನ ನೆನೆಗುದಿಗೆ ಬಿದ್ದಿರುವ ಕಾರಣದಿಂದ ರಾಜ್ಯಕ್ಕೆ ಹಂಚಿಕೆಯಾಗಿರುವ ನೀರನ್ನು ನಿಗಧಿತ ಅವಧಿಯಲ್ಲಿ ಬಳಸಿಕೊಳ್ಳಲಾಗದೆ ರಾಜ್ಯದ ಜನತೆಗೆ ಅಪಾರ ನಷ್ಟವುಂಟಾಗಿರುವ ಕುರಿತು. |

**ಕೆ.ಆರ್. ಮಹಾಲಕ್ಷ್ಮಿ**
**ಕಾರ್ಯದರ್ಶಿ**

---

**ಪ್ರತಿ ದಿನದ ವಿಧಾನ ಪರಿಷತ್ತಿನ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.**

**www.kla.kar.nic.in/council/council.htm**